# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 171
ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 17.07.2019
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳೆಷ್ಟು ; (ವಿವರ ನೀಡುವುದು) | ಚಾಮರಾಜನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು: 1421<br>ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳು: 242 |
| ಆ) | ಕಳೆದ 5 ವರ್ಷಗಳಿಂದ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆಂದು ಲಭ್ಯವಿರುವ ಅನುದಾನದಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ (ವಿವರ ನೀಡುವುದು) | ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗಾಗಿ ಇರುವ ವಿಶೇಷ ಅಭಿವೃದ್ಧಿಯೋಜನೆಯಡಿಯಲ್ಲಿ ಕಳೆದ 5 ವರ್ಷಗಳಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ 25 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ರೂ. 265.52 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಇ) | ಈ ಅನುದಾನದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲಾಗಿದೆ (ವಿವರ ನೀಡುವುದು) | 9 ಕಟ್ಟಡಗಳು ಪೂರ್ಣಗೊಂಡಿರುತ್ತದೆ. ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಈ) | ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಯವಾಗ ಕಟ್ಟಡಗಳನ್ನು ನಿರ್ಮಿಸಲಾಗುವುದು? (ವಿವರ ನೀಡುವುದು) | ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಕೆಳಕಂಡ ಯೋಜನೆಗಳಡಿಯಲ್ಲಿ ಅನುದಾನ ಲಭ್ಯತೆ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುತ್ತಿದೆ.<br>1) ನರೇಗಾ<br>2) ಎಸ್.ಡಿ.ಪಿ.<br><br>ರಾಜ್ಯದಲ್ಲಿ 450 ಕಟ್ಟಡಗಳನ್ನು ನಗರ ಪ್ರದೇಶದಲ್ಲಿ ನಿರ್ಮಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ.<br><br>ನಿವೇಶನವಿಲ್ಲದಿರುವ ಪ್ರದೇಶಗಳಲ್ಲಿ ನಿವೇಶನ ನೀಡಲು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. |

ಸಂ:ಮಮಇ 81 ಐಸಿಡಿ 2019

(ಡಾ|| ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ,
ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು